**<u>ಕರ್ನಾಟಕ ವಿಧಾನ ಪರಿಷತ್ತು</u>**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 11(97)
ಸದಸ್ಯರ ಹೆಸರು : ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 09-12-2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 13 ವರ್ಷಗಳಿಂದ ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಡ್ತಿ ನೀಡದೆ ಇರಲು ಕಾರಣಗಳೇನು: | ಹೌದು<br><br>ಪ್ರೌಢ ಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡುವ ಸಂಬಂಧ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ) ಇವರ ಪತ್ರ ದಿನಾಂಕ:02-02-2024 ಮತ್ತು ದಿನಾಂಕ:07-03-2024ರಲ್ಲಿ ಹಾಗೂ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರು ದಿನಾಂಕ:23-04-2024ರ ಪತ್ರಗಳಲ್ಲಿ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸುವ ಬಗ್ಗೆ ಮಾರ್ಗದರ್ಶನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು.<br><br>ಈ ಪ್ರಸ್ತಾವನೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ದಿನಾಂಕ:16-10-2024ರಂದು ನೀಡಿರುವ ಅಭಿಪ್ರಾಯದನ್ವಯ ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ)ಯ ನಾಲ್ಕು ವಿಭಾಗಗಳಲ್ಲಿ ಸ್ನಾತಕೋತ್ತರ ಪದವಿ ಪಡೆದ ಅರ್ಹ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ ಸಾಮಾನ್ಯ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ, ಅಂತಿಮ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957ರ ನಿಯಮ 7-ಎ ರ ನಿಯಮದನ್ವಯ ಪರಿಶೀಲಿಸಿ ಅಗತ್ಯಕ್ರಮವಹಿಸಲು ಸರ್ಕಾರದ ಪತ್ರ ಸಂಖ್ಯೆ:ಇಪಿ 164 ಎಸ್‌ಓಹೆಚ್ 2023 ದಿನಾಂಕ:23-10-2024ರಲ್ಲಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು, ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ ಮತ್ತು ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರಿಗೆ ನಿರ್ದೇಶನ ನೀಡಲಾಗಿದೆ.<br><br>ಅದರನ್ವಯ ಶಾಲಾ ಶಿಕ್ಷಣ ಇಲಾಖೆಯಿಂದ ರಾಜ್ಯಮಟ್ಟದ ಪ್ರೌಢಶಾಲಾ ಸಹ ಶಿಕ್ಷಕರ ಒಂದೇ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ವಿಭಾಗೀಯ ಕಛೇರಿಗಳಿಂದ ಪಟ್ಟಿಯನ್ನು ಪಡೆದು, ಶಾಲಾ ಶಿಕ್ಷಣ ಇಲಾಖೆಯಿಂದ |
| ಆ) | ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಬಡ್ತಿಯನ್ನು ಯಾವ ಕಾಲ ಮಿತಿಯೊಳಗೆ ನೀಡಲಾಗುವುದು? | |

| | | |
|---|---|---|
| | | ತಾತ್ಕಾಲಿಕಾ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ, ಸದರಿ ತಾತ್ಕಾಲಿಕಾ ಜೇಷ್ಠತಾ ಪಟ್ಟಿಗೆ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಶೀಲಿಸಿ. ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ ನಂತರ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಬಡ್ತಿ ನೀಡುವ ಪ್ರಕ್ರಿಯೆಯ ಬಗ್ಗೆ ತ್ವರಿತವಾಗಿ ನಿಯಮಾನುಸಾರ ಕ್ರಮವಹಿಸಲಾಗುವುದು. |

**ಸಂಖ್ಯೆ: ಇಪಿ 412 ಡಿಜಿಡಬ್ಲ್ಯೂ 2024**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.